# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1165 |
| ಉತ್ತರಿಸಬೇಕಾದ ದಿನಾಂಕ | : | 28.12.2022 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪಶು ಆಸ್ಪತ್ರೆಗಳು ದುರಸ್ಥಿಗಳಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದಿಂದ ಕಳೆದ 2 ವರ್ಷಗಳಲ್ಲಿ ಕಟ್ಟಡದ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು) | ಬಂದಿದೆ.<br><br>ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ 2 ವರ್ಷಗಳಲ್ಲಿ ಕಟ್ಟಡದ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿರುತ್ತದೆ.<br><br>ಜಿಲ್ಲೆ / 2021–22 / 2022–23<br>ಕಲಬುರ್ಗಿ / 75.00 ಲಕ್ಷ / 75.00 ಲಕ್ಷ<br>ಯಾದಗಿರಿ / 20.00 ಲಕ್ಷ / 20.00 ಲಕ್ಷ |
| ಆ) | ಸದರಿ ಜಿಲ್ಲೆಗಳಲ್ಲಿ ಇರುವ ಪಶು ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸಲು ವೈದ್ಯಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಬಂದಿದ್ದಲ್ಲಿ, ವೈದ್ಯಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇರುವ ಸಂಸ್ಥೆಗಳಿಗೆ ಜಾನುವಾರುಗಳ ಚಿಕಿತ್ಸೆಗೆ ತೊಂದರೆ ಆಗದಂತೆ ಅಧಿಕ ಪ್ರಭಾರ ವ್ಯವಸ್ಥೆ ಮಾಡಲಾಗಿದೆ.<br><br>ಪ್ರಸ್ತುತ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಿರುತ್ತದೆ. ಆ ಪ್ರಕಾರ ವಿಶೇಷ ನೇರ ನೇಮಕಾತಿ ನಿಯಮದಡಿ ದಿನಾಂಕ:08-03-2022 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಅಭ್ಯರ್ಥಿಗಳು ಅರ್ಜಿಯೊಂದಿಗೆ ಸಲ್ಲಿಸಲಾದ ಮೂಲದಾಖಲಾತಿಗಳ ಪರಿಶೀಲನೆಯನ್ನು ಮಾಡಲಾಗಿದ್ದು, ಕನ್ನಡ ಭಾಷೆ ಅಭ್ಯಾಸ ಮಾಡದ ಅಭ್ಯರ್ಥಿಗಳಿಗೆ ಕೆ.ಇ.ಎ. ಮುಖಾಂತರ ಕನ್ನಡ ಭಾಷೆ ಪರೀಕ್ಷೆ ನಡೆಸಲಾಗಿರುತ್ತದೆ. |

| | | |
|---|---|---|
| | | ಅದರನ್ವಯ ಅರ್ಹತಾ ಪಟ್ಟಿ ತಯಾರಿಸಲಾಗುತ್ತಿದೆ, ಈ ನೇಮಕಾತಿ ಕುರಿತು ಶೈಕ್ಷಣಿಕ ವಿದ್ಯಾರ್ಹತೆಯನ್ನು (Merit) ಆಧರಿಸಿ ಆಯ್ಕೆ ಮಾಡುವುದು ಸರಿಯಲ್ಲವೆಂದು ಕೆಲವು ಅಭ್ಯರ್ಥಿಗಳು (50 ಜನ) ಸ್ಪರ್ಧಾತ್ಮಕ ಪರೀಕ್ಷೆ ನಡೆಸುವುದರ ಮುಖಾಂತರ ಹಾಗೂ ಇನ್ನಿತರೆ ಶೈಕ್ಷಣಿಕ ನ್ಯೂನ್ಯತೆಗಳ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:6662/2022 ರಂತೆ ದಾವೆಯನ್ನು ಹೂಡಿದ್ದು ಪ್ರಕರಣವು ವಿಚಾರಣೆ ಯಲ್ಲಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಆದೇಶದಂತೆ ಕ್ರಮವಹಿಸಲಾಗುವುದು.<br><br>250 ಕಿರಿಯ ಪಶು ವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು KEA ಮುಖಾಂತರ ಅಧಿಸೂಚನೆಯನ್ನು ಹೊರಡಿಸಿ ಆಯ್ಕೆ ಪ್ರಕ್ರಿಯೆ ಚಾಲನೆಯಲ್ಲಿದೆ.<br><br>ಡಿ ದರ್ಜೆ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿದ್ದು, ಹೊರಗುತ್ತಿಗೆ ಆಧಾರದ ಮೇಲೆ 2256 ಡಿ ದರ್ಜೆ ಹುದ್ದೆಗಳಿಗೆ ಸೇವೆಯನ್ನು ಪಡೆಯಲಾಗಿದೆ. ಕಲಬುರ್ಗಿ (121) ಮತ್ತು ಯಾದಗಿರಿ (69) ಡಿ ದರ್ಜೆ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ. |

**ಇ- ಪಸಂಮೀ 329 ಸಲೆವಿ 2022**

**(ಪ್ರಭು ಬಿ. ಚವ್ಹಾಣ್)**
**ಪಶುಸಂಗೋಪನೆ ಸಚಿವರು**